3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No.205/2018**

ಪ್ರಾಸಾ 5

ಚಾಸಾ 5

| | |
|---|---|
| ಹೆಸರು | ಕುಮಾರಯ್ಯ |
| ತಂದೆಯ ಹೆಸರು | ಲೇಟ್ ಬೋರಯ್ಯ |
| ವಯಸ್ಸು | 67 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸಸ್ಥಳ | ಬಿಳಿಗೆರೆಪಾಳ್ಯ |

ಸಾಕ್ಷಿಯನ್ನು ದಿನಾಂಕ 11.06.2025 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ**

1) ಈಗ ನನಗೆ ತೋರಿಸಿದ ದಾಖಲಾತಿಯಲ್ಲಿ ರಲ್ಲಿ ನನ್ನ ಸಹಿಗಳು ಇರುತ್ತವೆ. ಅದು ಅಮಾನತ್ತು ಪಂಚನಾಮೆಯಾಗಿದ್ದು ಅದನ್ನು ನಿಪಿ.6 ಎಂದು, ಸಾಕ್ಷಿಯ ಸಹಿಯನ್ನು ನಿಪಿ.6(ಎ) ಮತ್ತು (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಸುಮಾರು ಆರೇಳು ವರ್ಷಗಳ ಹಿಂದೆ ಬೆಳಿಗ್ಗೆ 10 – 11 ಗಂಟೆ ಸಮಯದಲ್ಲಿ ಗಡಬನಹಳ್ಳಿಗೆ ಹೋಗುತ್ತಿದ್ದಾಗ ಕೆಳಗಿನಪಾಳ್ಯದ ಹತ್ತಿರ ಕಿಬ್ಬನಹಳ್ಳಿ ಪೋಲೀಸರು ಇದ್ದರು. ಅವರು ಮಹಜರ್ ಮಾಡಿಕೊಳ್ಳಲು ಬಂದಿರುತ್ತೇವೆ , ಸಹಿಯನ್ನು ಮಾಡಿ ಎಂದು ಕೇಳಿ ನನ್ನ ಸಹಿಗಳನ್ನು ಪಡೆದುಕೊಂಡಿರುತ್ತಾರೆ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ವಶಕ್ಕೆ ತೆಗೆದುಕೊಂಡಿರುವುದಿಲ್ಲ. 1 ನೇ ಆರೋಪಿ ಗೊತ್ತು. ರಸ್ತೆಯ ಪಕ್ಕದಲ್ಲಿ ಅವಿನಾಶ್ ರವರು ನಿಂತಿದ್ದರು. ಬೇರೆ ಯಾರೂ ಇರಲಿಲ್ಲ. ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿ ಅವಿನಾಶ್ ರವರನ್ನು ಗುರುತಿಸುತ್ತೇನೆ.

(ಈ ಹಂತದಲ್ಲಿ ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರು ಮಾಡಿದ ಪಂಚನಾಮೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸರ್ಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗಂಡು ಅನುಮತಿ ನೀಡಲಾಯಿತು)

**ಪಾಟೀಸವಾಲು: ಸರ್ಕಾರಿ ಅಭಿಯೋಜಕರವರಿಂದಃ**

2) ದಿನಾಂಕ 27.02.2018 ರಂದು ಮಧ್ಯಾಹ್ನ 12.30 ರಿಂದ 1.00 ಗಂಟೆ ಸಮಯದಲ್ಲಿ ತಿಪಟೂರಿನ ಉಪಾಧೀಕ್ಷಕರು ಈ ಪ್ರಕರಣದ 3 ಮತ್ತು 5 ನೇ ಆರೋಪಿಗಳು 1 ನೇ ಆರೋಪಿಯ ಮನೆಯ ಅಡುಗೆ ಮನೆಯಲ್ಲಿ ಕೃತ್ಯಕ್ಕೆ ಉಪಯೋಗಿಸಿದ ಚಾಕುವನ್ನು ಬಚ್ಚಿಟ್ಟಿರುವುದಾಗಿ ತಿಳಿಸಿ ತೋರಿಸಿ ತೆಗೆದುಕೊಟ್ಟಿರುವುದನ್ನು ನಿಪಿ.6 ಪಂಚನಾಮ ಮೂಲಕ ಅಮಾನತ್ತುಪಡಿಸಿಕೊಂಡು ನಂತರ ಸ್ಥಳದಲ್ಲಿದ್ದ ನನ್ನ ಮತ್ತು ಚಾಸಾ.6 ರವರ ಸಹಿಗಳನ್ನು ಪಡೆದುಕೊಂಡಿರುತ್ತಾರೆಂದು ಎಂದರೆ ಸರಿಯಲ್ಲ. 1 ನೇ ಆರೋಪಿ ನನ್ನ ಜಾತಿಯವರು ಎಂದರೆ ಸರಿ. ಮೊದಲಿನಿಂದಲೂ 1 ರಿಂದ 3 ನೇ ಆರೋಪಿಗಳು ನನಗೆ ಗೊತ್ತು ಎಂದರೆ ಸರಿ. ಆದ್ದರಿಂದ, ಅವರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿಗಳ ಪರ ಶ್ರೀ.ಎನ್.ಬಿ. ವಕೀಲರಿಂದ :**

3) ಸ್ಥಳಕ್ಕೆ ಬಂದಿದ್ದ ಪೊಲೀಸರ ಹೆಸರು ನನಗೆ ಗೊತ್ತಿಲ್ಲ. ಪೊಲೀಸರು ನನಗೆ ಪರಿಚಯ ಇದ್ದುದ್ದರಿಂದ ನಾನು ಸಹಿ ಮಾಡಿರುತ್ತೇನೆ. ಪೂಲೀಸರನ್ನು ಬಿಟ್ಟು ಬೇರೆ ಯಾರೂ ಇರಲಿಲ್ಲ. ಸ್ಥಳದಲ್ಲಿ ಅವಿನಾಶ್ ರವರು ಇಲ್ಲದಿದ್ದರೂ ಸಹ ಇದ್ದ ಎಂದು ಸುಳ್ಳು ಸಾಕ್ಷಿ

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅವಿನಾಶ್ ರವರು ಪೊಲೀಸರೊಂದಿಗೆ ಇರಲಿಲ್ಲ ಎಂದರೆ ಸರಿ. ಅವಿನಾಶ್ ರವರು ಅವರ ಮನೆಯಲ್ಲಿ ಕೆಲಸ ಮಾಡುತ್ತಿದ್ದರು ಎಂದರೆ ಸರಿ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ